1143ನೇ(ಪ್ರಶ್ನೆ?)          2-72-06

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಡಾ. ವೈ.ಎ.ನಾರಾಯಣಸ್ವಾಮಿ ರವರು ಕೋಲಾರ ಜಿಲ್ಲೆ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಯೋಜನೆಯಾದ ಎತ್ತಿನಹೊಳೆ ಯೋಜನೆ ಪ್ರಾರಂಭವಾಗಿ 8 ವರ್ಷಗಳೇ ಕಳೆದರೂ ಇದುವರೆವಿಗೂ ನಿರೀಕ್ಷಿತ ಪ್ರಮಾಣದ ಪ್ರಗತಿ ಆಗಿಲ್ಲ ಈ ಯೋಜನೆಗೆ ಸಂಬಂಧಿಸಿದ ಬ್ಯಾರಗೊಂಡ್ಲು ಜಲಾಶಯವನ್ನು ಕಟ್ಟಲು ಭೂಸ್ವಾಧೀನ ಪ್ರಕ್ರಿಯೆ ಮುಗಿಯದೇ ಇರುವುದರಿಂದ ಈ ಯೋಜನೆ ಕಾರ್ಯಗತಗೊಳ್ಳುವ ಬಗ್ಗೆ ಹಾಗೂ ಆಭಾಗದ ಜನರಲ್ಲಿ ಸಂಶಯ ಮೂಡಿರುವ ಬಗ್ಗೆ ನಿಯಮ–72ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯದ ಕುರಿತು ಮಾನ್ಯ ಜಲಸಂಪನ್ಮೂಲ ಸಚಿವರ ಉತ್ತರ.**

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ರೂ.12,912.36 ಕೋಟಿ ಮೊತ್ತದ ಪರಿಷ್ಕೃತ ಯೋಜನಾ ವರದಿಗೆ ಸರ್ಕಾರದಿಂದ ದಿನಾಂಕ:17.2.2014 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಮೊದಲನೇ ಹಂತದ ಲಿಫ್ಟ್ ಕಾಮಗಾರಿಯನ್ನು 2014ನೇ ಸಾಲಿನಲ್ಲಿ ಪ್ರಾರಂಭಿಸಲಾಗಿದ್ದು, ಕಾಮಗಾರಿಯು ಪೂರ್ಣಗೊಳ್ಳುವ ಹಂತದಲ್ಲಿದೆ. ಅಲ್ಲದೆ, ಎರಡನೇ ಹಂತದ ಗುರುತ್ವ ಕಾಲುವೆಯ ಪೂರ್ಣ ಉದ್ದಕ್ಕೆ (260 ಕಿ.ಮೀ) ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು, ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ. ಇದಲ್ಲದೆ, ಎತ್ತಿನಹೊಳೆ ಯೋಜನೆಯಡಿಯಲ್ಲಿ ಬರುವ ರಾಮನಗರ ಫೀಡರ್, ಮಧುಗಿರಿ ಫೀಡರ್ ಮತ್ತು ಗೌರಿಬಿದನೂರು ಫೀಡರ್ ಕಾಲುವೆ ಕಾಮಗಾರಿಗಳನ್ನೂ ಸಹಾ ಪ್ರಾರಂಭಿಸಲಾಗಿದ್ದು, ವಿವಿಧ ಹಂತಗಳ ಪ್ರಗತಿಯಲ್ಲಿರುತ್ತವೆ.

ಸದರಿ ಯೋಜನೆಯನ್ನು 2014ನೇ ಸಾಲಿನಲ್ಲಿ ಪ್ರಾರಂಭಿಸಿದ್ದು, ಈ ಕೆಳಕಂಡ ಕಾರಣಗಳಿಂದಾಗಿ ಕಾಮಗಾರಿಯು ವಿಳಂಬವಾಗಿರುತ್ತದೆ.

- ✓ ಯೋಜನೆಯ lift component ಕಾಮಗಾರಿಗೆ ಅಗತ್ಯವಿರುವ ಖಾಸಗಿ ಜಮೀನನ್ನು (448 ಎ–33 ಗುಂ) ಭೂಸ್ವಾಧೀನಪಡಿಸಿಕೊಳ್ಳಲು ಸರ್ಕಾರದ ನಿರ್ದೇಶನದ ಅನ್ವಯ ನೇರ ಖರೀದಿಯಡಿ (direct purchase) ದರಗಳನ್ನು ನಿರ್ಧರಿಸುವಲ್ಲಿ ಭೂಮಾಲೀಕರ ಆಕ್ಷೇಪಣೆಯಿಂದ ಉಂಟಾಗಿರುವ ವಿಳಂಬದಿಂದಾಗಿ.
- ✓ ಅರಣ್ಯ ತೀರುವಳಿಗೆ ಸಂಬಂಧಿಸಿದಂತೆ, ರಾಷ್ಟ್ರೀಯ ಹಸಿರು ನ್ಯಾಯ ಪೀಠದಲ್ಲಿ ಒಟ್ಟು 7 ಪ್ರಕರಣಗಳು ದಾಖಲಾಗಿದ್ದು (ಸಕಲೇಶಪುರ ತಾಲ್ಲೂಕಿನಲ್ಲಿ 13.93 ಹೆ. ಅರಣ್ಯ ಭೂಮಿಯನ್ನು ವರ್ಗಾಯಿಸಲು ನೀಡಲಾದ ಶಾಸನಬದ್ಧ ಅನುಮತಿ ವಿರುದ್ಧ ನೀಡಲಾದ ಮೇಲ್ಮನವಿ ಸೇರಿದಂತೆ), ಇದರಿಂದ ಕಾಮಗಾರಿ ಅನುಷ್ಠಾನದಲ್ಲಿ ಅಡೆತಡೆ ಉಂಟಾಗಿರುತ್ತದೆ.
- ✓ ಹೊಸ ಭೂಸ್ವಾಧೀನ ಕಾಯ್ದೆ 2013 ರ ಅನ್ವಯ ಭೂಸ್ವಾಧೀನ ಪ್ರಕ್ರಿಯೆಗಳಲ್ಲಿ ಉಂಟಾಗುತ್ತಿರುವ ವಿಳಂಬದಿಂದಾಗಿ.
- ✓ ಯೋಜನೆಯ ಕಾಮಗಾರಿಗಳಿಗೆ ಅಗತ್ಯ ವಾರ್ಷಿಕ ಆರ್ಥಿಕ ಸಂಪನ್ಮೂಲಗಳ ಲಭ್ಯತೆಯಲ್ಲಿನ ಕೊರತೆಯಿಂದಾಗಿ.
- ✓ ಭೈರಗೊಂಡ್ಲು ಜಲಾಶಯ ನಿರ್ಮಾಣಕ್ಕೆ ಅಗತ್ಯವಿರುವ ಕೊರಟಗೆರೆ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕುಗಳ ಜಮೀನುಗಳ ದರ ನಿಗದಿಪಡಿಸುವಲ್ಲಿ ಉಂಟಾಗುತ್ತಿರುವ ವಿಳಂಬದಿಂದಾಗಿ.

ಭೈರಗೊಂಡ್ಲು ಜಲಾಶಯ ನಿರ್ಮಾಣ ಕಾಮಗಾರಿ, ಭೈರಗೊಂಡ್ಲು ಜಲಾಶಯದಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರೊದಗಿಸುವ ಕುಂದಾಣ ಲಿಫ್ಟ್ ಕಾಮಗಾರಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಫೀಡರ್ ಕಾಲುವೆ ಕಾಮಗಾರಿಗಳನ್ನು ಭೈರಗೊಂಡ್ಲು ಜಲಾಶಯ ನಿರ್ಮಾಣದಲ್ಲಿ ಉದ್ಭವಿಸಿರುವ ಭೂಸ್ವಾಧೀನ ಸಮಸ್ಯೆ ಇತ್ಯರ್ಥಗೊಂಡ ನಂತರ ಕೈಗೊಳ್ಳಲು ಯೋಜಿಸಲಾಗಿದೆ.

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿಯ ಮೊದಲನೇ ಹಂತದ lift component ಕಾಮಗಾರಿಗಳನ್ನು ಮತ್ತು ಎರಡನೇ ಹಂತದಲ್ಲಿ ಬರುವ ಗುರುತ್ವ ಕಾಲುವೆಯ ಸರಪಳಿ 0.00 ರಿಂದ 33.00 ಕಿ.ಮೀ ವರೆಗಿನ ಕಾಮಗಾರಿಗಳನ್ನು ಪೂರ್ಣಗೊಳಿಸಿ, 2021 ರ ಮುಂಗಾರು ಹಂಗಾಮಿನಲ್ಲಿ ಪ್ರಾಯೋಗಿಕವಾಗಿ ಭಾಗಶಃ ಯೋಜನೆಯನ್ನು ಚಾಲನೆಗೊಳಿಸಲು ಕಾರ್ಯಕ್ರಮ ರೂಪಿಸಲಾಗಿದೆ. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು 2023ರ ಅಂತ್ಯಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಒಟ್ಟಾರೆ ಎತ್ತಿನಹೊಳೆ ಯೋಜನೆಗೆ ಡಿಸೆಂಬರ್ 2020 ರ ಅಂತ್ಯಕ್ಕೆ ರೂ.7721.65 ಕೋಟಿಗಳ ಸಂಚಿತ ವೆಚ್ಚ ಮಾಡಲಾಗಿದೆ.

**ಸಂಖ್ಯೆ: ಜಸಂಇ 07 ಡಬ್ಲ್ಯೂಎಲ್ಎ 2021**

(ರಮೇಶ್ ಲ ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು
(ಬೃಹತ್ ಮತ್ತು ಮಧ್ಯಮ ನೀರಾವರಿ)